**ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರವರ ಕಛೇರಿ, ನೃಪತುಂಗ ರಸ್ತೆ, ಬೆಂಗಳೂರು–1**

ಸಂಖ್ಯೆ: ಸಿ8(3) ಶಾ.ಶಿ.ಆ. ಹೊ.ಪ್ರಾ.ಶಾ. ಮಾರ್ಗಸೂಚಿ / 2005–06 ದಿನಾಂಕ : 07–06–2005

## ನಡವಳಿಗಳು

ವಿಷಯ : 2006–07 ನೇ ಸಾಲಿನಿಂದ ಹೊಸದಾಗಿ ಶಾಶ್ವತ ಅನುದಾನ ರಹಿತ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಮಂಜೂರಾತಿ ನೀಡುವ ಕುರಿತು ಅನುಸರಿಸಬಹುದಾದ ವಿಧಾನ ಮಾರ್ಗಸೂಚಿ ಮತ್ತು ವೇಳಾಪಟ್ಟಿ

ಉಲ್ಲೇಖ : ಮಾನ್ಯ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಕರ್ನಾಟಕ ಸರ್ಕಾರ ಬೆಂಗಳೂರು ಇವರು ದಿ: 28–05–2005 ರಂದು ನೀಡಿರುವ ಆದೇಶದ ಮೇರೆಗೆ.

– –

ಪ್ರತಿ ವರ್ಷ ಅನೇಕ ಖಾಸಗಿ ಶಿಕ್ಷಣ ಸಂಸ್ಥೆಗಳು ಹೊಸ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆಗಳನ್ನು ಸಲ್ಲಿಸುತ್ತಿದ್ದಾರೆ. ಮೇ 30 ರಿಂದ ಶಾಲೆಗಳು ಪ್ರಾರಂಭಗೊಳ್ಳುತ್ತಿದ್ದು, ಈ ದಿನಾಂಕದ ನಂತರವೂ ಅರ್ಜಿಗಳನ್ನು ಸಲ್ಲಿಸುತ್ತಿರುವುದು ಕಂಡು ಬಂದಿದೆ. ಹಲವು ಕಾರಣಗಳಿಂದ ಉಪನಿರ್ದೇಶಕರು ಮತ್ತು ನಿರ್ದೇಶಕರು ಪ್ರೌಢ ಶಿಕ್ಷಣ ಇವರ ಹಂತದಲ್ಲಿ ಪರಿಶೀಲಿಸಲ್ಪಟ್ಟು ಜೂನ್ ನಂತರವೂ ಮಂಜೂರಾತಿ ಆದೇಶಗಳನ್ನು ನೀಡಲಾಗುತ್ತಿದೆ. ಹಲವು ಕಾರಣಗಳಿಂದ ಆದೇಶ ನಿಧಾನವಾಗಿ ದೊರಕುತ್ತಿರುವುದರಿಂದ ಹೊಸ ಶಾಲೆಗಳಿಗೆ ವಿದ್ಯಾರ್ಥಿಗಳು ದೊರಕುತ್ತಿಲ್ಲ. ಇದರಿಂದ ಶಾಲೆಗಳು ರದ್ದಾಗುವುದು ಮತ್ತು ವಿದ್ಯಾರ್ಥಿಗಳ ದಾಖಲಾತಿ ಮನ್ನಾ ನೀಡುವ ಪರಿಸ್ಥಿತಿ ಉಂಟಾಗುತ್ತದೆ. ಈ ರೀತಿಯ ವ್ಯರ್ಥ ಕ್ರಮವನ್ನು ತಪ್ಪಿಸಬೇಕಾಗಿದೆ. ಹೊಸ ಶಾಲೆಗಳು ಪ್ರಾರಂಭಿಸಲು ಶಿಫಾರಸ್ಸು ಮಾಡುವಾಗ ವಸ್ತು ನಿಷ್ಠ ಅಂಶಗಳನ್ನು ಗಮನಿಸಬೇಕಾಗಿದೆ.

ಕಾರ್ಯದರ್ಶಿಗಳು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಇವರು ದಿನಾಂಕ : 28–05–2005 ರಂದು ನೀಡಿರುವ ಸೂಚನೆಯ ಮೇರೆಗೆ ಹೊಸದಾಗಿ ಶಾಲೆ ಪ್ರಾರಂಭಿಸಲು ಅನುಸರಿಸುವ ವಿಧಾನಗಳ ಬಗ್ಗೆ ವಿವರವಾಗಿ ಚರ್ಚಿಸಿ ಪ್ರಸ್ತುತ ಅನುಸರಿಸುತ್ತಿರುವ ನಿಯಮಗಳ ಜೊತೆಗೆ ಹಲವು ವಿಧಿ ವಿಧಾನಗಳನ್ನು ಅನುಸರಿಸುವ ಕುರಿತು ಈ ಕೆಳಕಂಡಂತೆ ಆದೇಶಿಸಲಾಗಿದೆ.

ಆದೇಶ ಸಂಖ್ಯೆ ಸಿ8(3) / ಶಾ.ಪ್ರ.ತಿ/2005 ಬೆಂಗಳೂರು, ದಿನಾಂಕ : 7ನೇ ಜೂನ್ 2005

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನಲೆಯಲ್ಲಿ 2006–07ನೇ ಸಾಲಿನಿಂದ ಜಾರಿಗೆ ಬರುವಂತೆ ಹೊಸದಾಗಿ ಖಾಸಗಿ ಶಾಶ್ವತ ಅನುದಾನ ರಹಿತ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಹಲವು ಹಂತಗಳಲ್ಲಿ ಅನುಸರಿಸಬೇಕಾದ ಮಾರ್ಗಸೂಚಿ, ವೇಳಾ ಪಟ್ಟಿಯನ್ನು ಅನುಬಂಧ–1 ಮತ್ತು 2 ರಂತೆ ಕ್ರಮ ಕೈಗೊಳ್ಳಲು ಆದೇಶಿಸಿದೆ.

ನಿರ್ದೇಶಕರು (ಪ್ರೌಢಶಿಕ್ಷಣ)

ಪ್ರತಿಗಳು:–

1. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ
2. ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ
3. ಬೆಂಗಳೂರು ಮತ್ತು ಮೈಸೂರು ವಿಭಾಗದ ಎಲ್ಲಾ ಉಪನಿರ್ದೇಶಕರು (ಆಡಳಿತ) ಇವರಿಗೆ.
4. ಕಛೇರಿ ಪ್ರತಿ

ಸಮಿತಿಯು ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಸಹಯೋಗದೊಂದಿಗೆ ಸ್ಥಳ ಪರಿಶೀಲಿಸುವುದು ಹಾಗೂ ಕ್ಷೇತ್ರ ಶಿಕ್ಷಣಾಧಿಕಾರಿಗಳು ಪ್ರಸ್ತಾವನೆಯಲ್ಲಿನ ಎಲ್ಲಾ ದಾಖಲೆಗಳನ್ನು ದೃಢೀಕರಿಸುವುದು.

ಜಿಲ್ಲಾ ಪರಿಶೀಲನಾ ಸಮಿತಿಯು ಸಲ್ಲಿಸಿರುವ ಪ್ರಸ್ತಾವನೆಗಳನ್ನು ಜಿಲ್ಲಾ ಉಪನಿರ್ದೇಶಕರು ಕೂಲಂಕುಷವಾಗಿ ಪರಿಶೀಲಿಸಿ ಅಧಿಕೃತ ವೇಳಾ ಪಟ್ಟಿಯಂತೆ ಸ್ಪಷ್ಟ ಶಿಫಾರಸ್ಸಿನೊಂದಿಗೆ ನಿರ್ದೇಶಕರು, ಪ್ರೌಢಶಿಕ್ಷಣ ಇವರ ನಿರ್ದೇಶನಾಲಯಕ್ಕೆ ಸಲ್ಲಿಸುವುದು.

ನಿರ್ದೇಶಕರು, ಪ್ರೌಢಶಿಕ್ಷಣ ಇವರ ಹಂತದಲ್ಲಿ :–

ಜಿಲ್ಲಾ ಉಪನಿರ್ದೇಶಕರಿಂದ ಬಂದಂತಹ ಪ್ರಸ್ತಾವನೆಗಳನ್ನು ಪರಿಶೀಲಿಸಿ ಶಿಕ್ಷಣ ಕಾಯ್ದೆ ನಿಯಮದಂತೆ ಪ್ರೌಢಶಾಲೆಯನ್ನು ಪ್ರಾರಂಭಿಸಲು ಅನುಮತಿ ಅಥವಾ ತಿರಸ್ಕರಿಸುವ ಪ್ರಕ್ರಿಯೆಯನ್ನು ನಿಗಧಿತ ಅವಧಿಯೊಳಗೆ ಪೂರೈಸುವುದು.

**ಪ್ರಥಮ ಮಾನ್ಯತೆ ನೀಡುವ ಬಗ್ಗೆ**

ಶಿಕ್ಷಣ ಕಾಯ್ದೆ 1983ರ ನಿಯಮ 36ರ ಪ್ರಕಾರ ಹಾಗೂ ನೋಂದಣಿ ಆದೇಶದಲ್ಲಿನ ಷರತ್ತುಗಳನ್ನು ಪೂರೈಸುವ ಬಗ್ಗೆ ಶಾಲೆ ಪ್ರಾರಂಭಿಸಿದ ಎರಡು ತಿಂಗಳೊಳಗಾಗಿ ಸಂಸ್ಥೆಯು ಜಿಲ್ಲಾ ಉಪನಿರ್ದೇಶಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿಗಳ ಮೂಲಕ ವರದಿ ಸಲ್ಲಿಸಬೇಕು.

ಶಿಕ್ಷಣ ಕಾಯ್ದೆ ನಿಯಮಗಳಲ್ಲಿ ನಿಗದಿಪಡಿಸಿದ ನಿಬಂಧನೆಗಳಂತೆ ಪರಿಶೀಲಿಸಿ ಪ್ರಥಮ ಮಾನ್ಯತೆಯನ್ನು ನೀಡುವುದು. ಶಿಕ್ಷಣ ಸಂಸ್ಥೆಯ ಎಲ್ಲಾ ಷರತ್ತುಗಳನ್ನು ಶಾಲಾ ಪ್ರಾರಂಭದ ಎರಡು ವರ್ಷಗಳಲ್ಲಿ ಪೂರೈಸದಿದ್ದಲ್ಲಿ ಶಾಲಾ ನೋಂದಣಿಯನ್ನು ರದ್ದುಗೊಳಿಸಲು ಸಂಬಂಧಿತ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡುವುದು.

**ಅನುಬಂಧ–2**

ಹೊಸ ಪ್ರೌಢಶಾಲೆಗಳು ಮಂಜೂರಾತಿ ನೀಡುವ ಸಂಬಂಧ ಅನುಸರಿಸುವ ವೇಳಾ ಪಟ್ಟಿ

| | | |
|---|---|---|
| 1 | ಜಿಲ್ಲಾ ಪರಿಶೀಲನಾ ಸಮಿತಿ ರಚನೆ | ಜೂನ್ ಮಾಹೆಯಲ್ಲಿ |
| 2 | ಮುಂದಿನ ಶೈಕ್ಷಣಿಕ ವರ್ಷದಲ್ಲಿ ಶಾಲೆ ಪ್ರಾರಂಭಿಸಲು ಅರ್ಜಿ ಸಲ್ಲಿಸುವ ಕುರಿತು ಕಛೇರಿಗಳಲ್ಲಿ ಮತ್ತು ಪತ್ರಿಕೆಗಳಲ್ಲಿ ಪ್ರಕಟಣೆ. | ಜುಲೈ 30ರ ಒಳಗಾಗಿ |
| 3 | ಹೊಸ ಪ್ರೌಢಶಾಲೆಗಳು ಪ್ರಾರಂಭಿಸುವ ಬಗ್ಗೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ ನಿಗದಿ | ಅಕ್ಟೋಬರ್ 30 |
| 4 | ಜಿಲ್ಲಾ ಪರಿಶೀಲನಾ ಸಮಿತಿ ಸ್ಥಳ ಪರಿಶೀಲನಾ ವರದಿ ನೀಡುವ ಕೊನೆಯ ದಿನಾಂಕ | ಡಿಸೆಂಬರ್ 31 |
| 5 | ಉಪನಿರ್ದೇಶಕರು ಪ್ರಸ್ತಾವನೆಗಳನ್ನು ನಿರ್ದೇಶಕರು, ಪ್ರೌಢ ಶಿಕ್ಷಣ ಇವರಿಗೆ ಕಳುಹಿಸಲು ಕೊನೆಯ ದಿನಾಂಕ | ಜನವರಿ 31 ರೊಳಗೆ |
| 6 | ನಿರ್ದೇಶಕರು, ಪ್ರೌಢಶಿಕ್ಷಣ ರವರು ಮಂಜೂರಾತಿ / ತಿರಸ್ಕೃತ ಆದೇಶ ನೀಡುವ ಕೊನೆಯ ದಿನಾಂಕ | ಮಾರ್ಚ್ 31 ರೊಳಗೆ |
| 7 | ಹೊಸ ಪ್ರೌಢಶಾಲೆ ಪ್ರಾರಂಭಿಸಲು ಮಂಜೂರಾತಿ ಪಡೆದು ಪ್ರಥಮ ಶೈಕ್ಷಣಿಕ ಮಾನ್ಯತೆ ಮನವಿ ಸಲ್ಲಿಸಲು ಕೊನೆಯ ದಿನಾಂಕ | ಆಗಸ್ಟ್ 31 ರೊಳಗೆ |
| 8 | ಪ್ರಥಮ ಶೈಕ್ಷಣಿಕ ಮಾನ್ಯತೆ ನೀಡಲು ಕೊನೆಯ ದಿನಾಂಕ | ಡಿಸೆಂಬರ್ 31 ರೊಳಗೆ |